**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 298/2023**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ಧ**

**ಆರೋಪಿತರು:**
1. ಶೋಭಾ ಕೋಂ ಮಂಜುನಾಥ,
41 ವರ್ಷ ವಯಸ್ಸು,
ವಾಸ: ರಾಘವೇಂದ್ರ ಸ್ವಾಮಿ ಮಠದ ಹಿಂಭಾಗ,
ಕೋಟೆ, ಚನ್ನರಾಯಪಟ್ಟಣ ಟೌನ್, ಹಾಸನ.
2. ಶೋಭಾ ಸಿ. ಕೋಂ ಮಹದೇವ,
32 ವರ್ಷ ವಯಸ್ಸು,
ವಾಸ: ಅರಳೀಕಟ್ಟೆ, ಅಗ್ರಹಾರ ಬೀದಿ,
ಚನ್ನರಾಯಪಟ್ಟಣ ಟೌನ್, ಹಾಸನ.

## ಆಪಾದನೆ

**ದೀಪು ಬಿ.ಸಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ಆಪಾದನೆ ಏನೆಂದರೆ,

ದಿನಾಂಕ: 28.11.2022 ರಂದು ಬೆಳಗ್ಗೆ 11.00 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಚನ್ನರಾಯಪಟ್ಟಣ ಟೌನ್, ರಾಘವೇಂದ್ರಸ್ವಾಮಿಯ ದೇವಸ್ಥಾನದ ಹಿಂಭಾಗದಲ್ಲಿ ಸಾಕ್ಷಿ.1 ರವರ ಮನೆಯ ಗೋಡೆಯನ್ನು ಇಲಿಗಳು ಬಿಲಾ ತೋಡಿದ್ದು, ಈ ಬಿಲವನ್ನು ಸಾಕ್ಷಿ.1 ರವರು ಮುಚ್ಚಲು ಹೋಗಿದ್ದಾಗ, 1 ನೇ ಆರೋಪಿಯಾದ ನೀವು ಸಮಾನ ಉದ್ದೇಶದಿಂದ, ಸಾಕ್ಷಿ.1 ರವರು ತಡೆದು, ಅವರಿಗೆ ಅಕ್ರಮ ತಡೆಯುಂಟುಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂ: 341 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿಯಾದ ನೀವು ಸಾಕ್ಷಿ.1 ರವರಿಗೆ ಇದು ನಮ್ಮ ಜಾಗ, ಇಲ್ಲಿ ಏಕೆ ಮುಚ್ಚುತ್ತಿದ್ದೀಯಾ ಎಂದು ಸಾಕ್ಷಿ.1 ರವರನ್ನು ಕುರಿತು ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.1 ರವರಿಗೆ ಸೂಳೆ ಮುಂಡೆ, ಬೇವರ್ಸಿ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 504 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**3)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿಯಾದ ನೀವು ನಿಮ್ಮ ಸ್ವಇಚ್ಛೆಯಿಂದ ಸಾಕ್ಷಿ.1 ರವರ ತಲೆಯ ಜುಟು ಹಿಡಿದು ಎಳೆದಾಡಿ ಕೆಳಕ್ಕೆ ತಳ್ಳಿ, 2 ನೇ ಆರೋಪಿಯಾದ ನೀವು ನಿಮ್ಮ ಕೈಯಿಂದ ಸಾಕ್ಷಿ.1 ರವರ ಎದೆಗೆ ಗುದ್ದಿ ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**4)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, ಸಾಕ್ಷಿ.1 ರವರಿಗೆ ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆ ಉಂಟು ಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

ದಿನಾಂಕಃ **01.03.2024**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.

**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ</u>**

**<u>ಸಿಸಿ ಸಂಖ್ಯೆಃ 298/2023</u>**

**<u>ಪಿರ್ಯಾದಿದಾರರುಃ</u>** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**<u>ಆರೋಪಿತರುಃ</u>** 1. ಶೋಭಾ ಕೋಂ ಮಂಜುನಾಥ,
41 ವರ್ಷ ವಯಸ್ಸು,
ವಾಸಃ ರಾಘವೇಂದ್ರ ಸ್ವಾಮಿ ಮಠದ ಹಿಂಭಾಗ,
ಕೋಟೆ, ಚನ್ನರಾಯಪಟ್ಟಣ ಟೌನ್, ಹಾಸನ.

**<u>ಆಪಾದನೆ</u>**

**ಪ್ರಶ್ನೆಃ** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ಆಪಾದನೆ ನಿಮಗೆ ತಿಳಿಯಿತೆ?

ಉತ್ತರಃ ಅರ್ಥವಾಯಿತು

**ಪ್ರಶ್ನೆಃ** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಉತ್ತರಃ ವಿಚಾರಣೆಯಾಗಬೇಕು

(ಈ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **01.03.2024**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 298/2023**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತರು:** 2. ಶೋಭಾ ಸಿ. ಕೋಂ ಮಹದೇವ,
32 ವರ್ಷ ವಯಸ್ಸು,
ವಾಸ: ಅರಳೀಕಟ್ಟೆ, ಅಗ್ರಹಾರ ಬೀದಿ,
ಚನ್ನರಾಯಪಟ್ಟಣ ಟೌನ್, ಹಾಸನ.

**ಆಪಾದನೆ**

**ಪ್ರಶ್ನೆ:** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ಆಪಾದನೆ ನಿಮಗೆ ತಿಳಿಯಿತೆ?

ಉತ್ತರ: ಅರ್ಥವಾಯಿತು

**ಪ್ರಶ್ನೆ:** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಉತ್ತರ: ವಿಚಾರಣೆಯಾಗಬೇಕು

(ಈ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕ: **01.03.2024**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.